# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 414 (511) |
| ಸದಸ್ಯರ ಹೆಸರು | | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 20-02-2023 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಎಷ್ಟು ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುತ್ತವೆ. | ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ:440.<br><br>440 ಕಾಲೇಜುಗಳ ಪೈಕಿ 412 ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗಿದ್ದು, ಉಳಿದ 28 ಕಾಲೇಜುಗಳಿಗೆ ಹುದ್ದೆ ಮಂಜೂರಾಗಿರುವುದಿಲ್ಲ. ಮಂಜೂರಾದ 412 ಪ್ರಾಂಶುಪಾಲರ ಹುದ್ದೆಗಳು ಪ್ರಸ್ತುತ ಖಾಲಿ ಇರುತ್ತವೆ. |
| ಆ) | ಪ್ರಭಾರಿ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು; | ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಎಲ್ಲಾ 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಜೇಷ್ಠತೆಯಲ್ಲಿ ಹಿರಿಯರಾದ ಸಹ/ಸಹಾಯಕ ಪ್ರಾಧ್ಯಾಪಕರಿಗೆ ಪ್ರಾಂಶುಪಾಲರ ಕಾರ್ಯವನ್ನು ನಿರ್ವಹಿಸಲು ನಿಯೋಜಿಸಲಾಗಿದೆ. |
| ಇ) | ಎಷ್ಟು ವರ್ಷಗಳಿಂದ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇವೆ; ಖಾಲಿ ಇರಲು ಕಾರಣಗಳೇನು; (ವಿವರ ನೀಡುವುದು) | ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಇಲಾಖೆಯ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/91/ಡಿಸಿಇ/ 2004 ದಿನಾಂಕ:25.09.2009 ರಲ್ಲಿ ಜಾರಿಗೊಳಿಸಲಾಗಿದ್ದು, ಸದರಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ.<br><br>ಅದರಂತೆ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ದಿನಾಂಕ:25.09.2009 ರ ಆದೇಶ ಜಾರಿಗೊಂಡ ನಂತರದಿಂದ ಹಾಗೂ ಕಾಲಕಾಲಕ್ಕೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಖಾಯಂ ಪ್ರಾಂಶುಪಾಲರ ನಿವೃತ್ತಿ/ನಿಧನ ಇತ್ಯಾದಿ ಕಾರಣಗಳಿಂದ ತೆರವಾಗಿರುವ ಕಾರಣ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುತ್ತವೆ. |
| ಈ) | ಈ ಕಾಲೇಜುಗಳಲ್ಲಿ ಅರ್ಹತೆ ಇರುವ ಸಹ ಪ್ರಾಧ್ಯಾಪಕರನ್ನು ಪದೋನ್ನತಿಯಿಂದ ಪ್ರಾಂಶುಪಾಲರ ಹುದ್ದೆಗೆ ನೇಮಕ ಮಾಡಲು ಇರುವ ತೊಂದರೆಗಳೇನು; (ವಿವರ ನೀಡುವುದು) | ದಿನಾಂಕ:25.09.2009 ರ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/91/ಡಿಸಿಇ/2004 ರಲ್ಲಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಜಾರಿಗೊಳಿಸಲಾಗಿದ್ದು, ಸದರಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ. ಅಲ್ಲದೆ, ಸರ್ಕಾರವು ಕಾಲೇಜು ಶಿಕ್ಷಣ ಇಲಾಖೆಯಲ್ಲಿ 2006 ರ ಯು.ಜಿ.ಸಿ. ಪರಿಷ್ಕೃತ ವೇತನ ಶ್ರೇಣಿಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ಹೊರಡಿಸಿರುವ |

| | | |
|---|---|---|
| | | ದಿನಾಂಕ:24.12.2009 ರ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/37/ಯುಎನ್‌ಇ/2009 ರಲ್ಲಿಯೂ ಸಹ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ. ಆದುದರಿಂದ, ಪ್ರಾಂಶುಪಾಲರ ಹುದ್ದೆಗೆ ಪದೋನ್ನತಿ ನೀಡಲು ಅವಕಾಶ ಇರುವುದಿಲ್ಲ. |
| ಉ) | ಖಾಯಂ ಪ್ರಾಂಶುಪಾಲರುಗಳು ಇಲ್ಲದೇ ಗುಣಮಟ್ಟದೊಂದಿಗೆ ಸಮರ್ಪಕವಾಗಿ ಕಾಲೇಜು ನಡೆಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಕಾಲೇಜಿನ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಎಲ್ಲಾ 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಜೇಷ್ಠತೆಯಲ್ಲಿ ಹಿರಿಯರಾದ ಸಹ/ಸಹಾಯಕ ಪ್ರಾಧ್ಯಾಪಕರು ಪ್ರಾಂಶುಪಾಲರ ಕಾರ್ಯವನ್ನು ನಿರ್ವಹಿಸುತ್ತಿರುತ್ತಾರೆ. ಈ ಮೂಲಕ ಕಾಲೇಜುಗಳನ್ನು ಗುಣಮಟ್ಟದೊಂದಿಗೆ ಸಮರ್ಪಕವಾಗಿ ನಡೆಸಲು ಕ್ರಮವಹಿಸಲಾಗಿದೆ. |

ಇಡಿ 70 ಡಿಸಿಇ 2023

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು